## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಶ್ರೀಶೈಲ ಶ.ಬಿರಾದಾರ, ಅಧ್ಯಕ್ಷರು, ಬಂದಾಳ ಗ್ರಾಮ ಪಂಚಾಯತ್, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕ್ರಮ ಜರುಗಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018 ದಿನಾಂಕ:02.02.2019.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ವಿಜಯಪುರ ಇವರ ಪತ್ರ ಸಂಖ್ಯೆ:ಜಿಪಂಅ/ಗ್ರಾಪಂ/ಸಿಬ್ಬಂದಿ/ಸಿಆರ್–173/2017–18/5492, ದಿ:25–03–2019.
3. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, ಇವರ ಪತ್ರ ಹಾಗೂ ವಿಚಾರಣಾ ವರದಿ ಸಂಖ್ಯೆ:ಪ್ರಾಆಬೆ:ಜಿಪಂ:43(ಎ):ಸಿಆರ್–04:2019–20, ದಿನಾಂಕ:17.01.2020.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5) ರಡಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಮೇಲೆ ದುರ್ವರ್ತನೆ, ಅಧಿಕಾರ ಮತ್ತು ಹಣ ದುರುಪಯೋಗಕ್ಕಾಗಿ ಕ್ರಮಕೈಗೊಳ್ಳುವ ಸಲುವಾಗಿ ವಿಚಾರಣೆ ನಡೆಸುವ ಅಧಿಕಾರವನ್ನು ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಲಾಗಿದೆ.

ಅದರಂತೆ, ಮೇಲೆ ಓದಲಾದ ಕ್ರಮಾಂಕ (2)ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ವಿಜಯಪುರ ಜಿಲ್ಲೆ ಇವರು ಶ್ರೀ ಶ್ರೀಶೈಲ ಶ.ಬಿರಾದಾರ, ಅಧ್ಯಕ್ಷರು, ಬಂದಾಳ ಗ್ರಾಮ ಪಂಚಾಯತ್, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರಡಿ ಕೆಳಕಂಡ ಅಂಶದ ಮೇಲೆ ತನಿಖೆಯನ್ನು ನಡೆಸಲು ಕೋರಿರುತ್ತಾರೆ.

- ದಿನಾಂಕ:01–02–2017 ರಿಂದ 24–08–2018ರ ಅವಧಿಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀ ವಿಶ್ವನಾಥ ಬಗಲಿ ಇವರೊಂದಿಗೆ ಶಾಮೀಲಾಗಿ 1) 14ನೇ ಹಣಕಾಸು ಅನುದಾನ/ಯೋಜನೆಯಲ್ಲಿ ರೂ.30,55,098/– ಗಳು, 2) ಸ್ವಚ್ಛ ಭಾರತ ಮಿಷನ್ ಯೋಜನೆಯಡಿಯಲ್ಲಿ ರೂ.1,95,000/–ಗಳು, 3) ವರ್ಗ–1 ರಲ್ಲಿ ರೂ.2,73,900/– ಹಾಗೂ ವಿವಿಧ ವಸತಿ ಯೋಜನೆಗಳಲ್ಲಿ ರೂ.14,06,800/– ಗಳು ಹೀಗೆ ಒಟ್ಟು ರೂ.49,30,798/– ಗಳಷ್ಟು ಸರ್ಕಾರಿ ಹಣ ದುರುಪಯೋಗವಾಗಿರುವ ಆರೋಪದ ಬಗ್ಗೆ.

ಮೇಲೆ ಓದಲಾದ ಕ್ರಮಾಂಕ (3)ರ ಪ್ರಸ್ತಾವನೆಯಲ್ಲಿ ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ ಬೆಳಗಾವಿ, ಇವರು ಶ್ರೀ ಶ್ರೀಶೈಲ ಶ.ಬಿರಾದಾರ, ಅಧ್ಯಕ್ಷರು, ಬಂದಾಳ ಗ್ರಾಮ ಪಂಚಾಯತ್, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧದ ಅವ್ಯವಹಾರಗಳಿಗೆ ಸಂಬಂಧಿಸಿದಂತೆ ವಿಚಾರಣೆಯನ್ನು ಜರುಗಿಸಲಾಗಿರುತ್ತದೆ. ವಿಚಾರಣೆ ಸಮಯದಲ್ಲಿ ವಾದಿ ಮತ್ತು ಪ್ರತಿವಾದಿಗಳ ವಾದ ವಿವಾದಗಳನ್ನು ಆಲಿಸಿ ಅವರುಗಳು ಸಲ್ಲಿಸಿದ ಲಿಖಿತ ಹೇಳಿಕೆಯನ್ನು ಹಾಗೂ ಪ್ರಕರಣಕ್ಕೆ ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲಿಸಿ,

ಸದರಿ ಪ್ರಕರಣದಲ್ಲಿ ಶ್ರೀ ಶ್ರೀಶೈಲ ಶ.ಬಿರಾದಾರ, ಅಧ್ಯಕ್ಷರು, ಬಂದಾಳ ಗ್ರಾಮ ಪಂಚಾಯತ್, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ಮೇಲಿನ ಆರೋಪದಂತೆ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸಿಂದಗಿ ಇವರು ಸಲ್ಲಿಸಿದ ವರದಿಯನ್ನು ಪರಿಶೀಲಿಸಲಾಗಿದ್ದು, ಒಟ್ಟು ರೂ.49,30,798/- ಗಳಷ್ಟು ಸರ್ಕಾರದ ಹಣ ದುರುಪಯೋಗವಾಗಿರುವುದರಲ್ಲಿ ರೂ.14,06,800/- ಗಳಷ್ಟು ಹಣ ದುರುಪಯೋಗಕ್ಕೆ ಪಂಚಾಯತ್ ಅಭಿವೃದ್ಧಿ ಅಧಿಕಾರಿಯು ನೇರ ಹೊಣೆಯಾಗಿರುತ್ತಾರೆ ಹಾಗೂ ರೂ.35,23,998/- ಗಳಷ್ಟು ಹಣ ದುರುಪಯೋಗದಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹಾಗೂ ಅಧ್ಯಕ್ಷರ ಜಂಟಿ ಹೊಣೆಗಾರಿಕೆ ಇರುವುದಾಗಿ ತಿಳಿದುಬಂದಿರುತ್ತದೆ. ವಿಚಾರಣೆಯಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹಾಗೂ ಅಧ್ಯಕ್ಷರು ಜಂಟಿಯಾಗಿ ನಿಯಮಗಳ ಉಲ್ಲಂಘನೆ ಮಾಡಿ, ಸಾರ್ವಜನಿಕರ/ಸರ್ಕಾರದ ಹಣವನ್ನು ದುರುಪಯೋಗಪಡಿಸಿಕೊಂಡಿರುವುದು ಸಾಬೀತಾಗಿರುವುದರಿಂದ ಎದುರುದಾರರಾದ ಶ್ರೀ ಶ್ರೀಶೈಲ ಶ ಬಿರಾದಾರ ಅಧ್ಯಕ್ಷರು, ಗ್ರಾಮ ಪಂಚಾಯತ್, ಬಂದಾಳ ಇವರ ಸದಸ್ಯತ್ವವನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ರಡಿಯಲ್ಲಿ ಸದಸ್ಯತ್ವವನ್ನು ರದ್ದುಗೊಳಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಈ ಪ್ರಕರಣದ ವಿಚಾರಣಾ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ, ಶ್ರೀ ಶ್ರೀಶೈಲ ಶ.ಬಿರಾದಾರ, ಅಧ್ಯಕ್ಷರು, ಬಂದಾಳ ಗ್ರಾಮ ಪಂಚಾಯತ್, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಮಾಡಲಾದ ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ ಶ್ರೀ ಶ್ರೀಶೈಲ ಶ.ಬಿರಾದಾರ, ಅಧ್ಯಕ್ಷರು, ಬಂದಾಳ ಗ್ರಾಮ ಪಂಚಾಯತ್, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ಮತ್ತು 48(5) ರನ್ವಯ ಗ್ರಾಮ ಪಂಚಾಯತ್ ಅಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವದಿಂದ ತೆಗೆದುಹಾಕಲು ಹಾಗೂ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 157(2) ಮತ್ತು 246(8) ರಡಿ ದುರುಪಯೋಗ ಪಡಿಸಿಕೊಂಡಿರುವ ಮೊತ್ತವನ್ನು ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಸಂಬಂಧಪಟ್ಟವರಿಂದ ಭೂಕಂದಾಯ ಬಾಕಿ ಎಂದು ವಸೂಲಿ ಮಾಡಲು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸಿಂದಗಿ ಇವರಿಗೆ ಆದೇಶಿಸಲು ಮತ್ತು ಹಣ ದುರುಪಯೋಗಕ್ಕೆ ಕಾರಣರಾದ ಸಂಬಂಧಿಸಿದ ಪಂಚಾಯತ್ ಅಭಿವೃದ್ಧಿ ಅಧಿಕಾರಿ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ವಿಜಯಪುರ ಇವರಿಗೆ ತಿಳಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 161 ಗ್ರಾಪಂಅ 2020 ಬೆಂಗಳೂರು, ದಿನಾಂಕ:02.03.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಶ್ರೀಶೈಲ ಶ.ಬಿರಾದಾರ, ಅಧ್ಯಕ್ಷರು, ಬಂದಾಳ ಗ್ರಾಮ ಪಂಚಾಯತ್, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ಮತ್ತು 48(5) ರನ್ವಯ ಸದರಿ ಗ್ರಾಮ ಪಂಚಾಯತ್ ಅಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವ ಸ್ಥಾನದಿಂದ ತಕ್ಷಣ ಜಾರಿಗೆ ಬರುವಂತೆ ತೆಗೆದುಹಾಕಿ ಆದೇಶಿಸಿದೆ ಹಾಗೂ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 157(2)

ಮತ್ತು 246(8) ರಡಿ ದುರುಪಯೋಗಪಡಿಸಿಕೊಂಡಿರುವ ಮೊತ್ತವನ್ನು ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಸಂಬಂಧಪಟ್ಟವರಿಂದ ಭೂಕಂದಾಯ ಬಾಕಿ ಎಂದು ವಸೂಲಿ ಮಾಡಲು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸಿಂದಗಿ ಇವರಿಗೆ ಆದೇಶಿಸಲು ಮತ್ತು ಹಣ ದುರುಪಯೋಗಕ್ಕೆ ಕಾರಣರಾದ ಸಂಬಂಧಿಸಿದ ಪಂಚಾಯತ್ ಅಭಿವೃದ್ಧಿ ಅಧಿಕಾರಿ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ವಿಜಯಪುರ ಇವರಿಗೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar 02/03/2020.
(ಬಿ. ನವೀನ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಪ್ರತಿ:</u>

1) ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ.
2) ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ವಿಜಯಪುರ ಜಿಲ್ಲೆ.
4) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬಂದಾಳ ಗ್ರಾಮ ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ.
6) ಶ್ರೀ ಶ್ರೀಶೈಲ ಶ.ಬಿರಾದಾರ, ಅಂದಿನ ಅಧ್ಯಕ್ಷರು, ಬಂದಾಳ ಗ್ರಾಮ ಪಂಚಾಯತ್, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ (**ಇವರಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ಮುಖಾಂತರ**)

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.
4) ಗಣಕ ಕೋಶ.